**Akashvani : Bangalore**
**National Bulletin In Kannada**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**21.01.2025** **19.35 hrs**

**<><*<><>*><>**

ಮುಖ್ಯಾಂಶಗಳು

- ತಾತ್ಕಾಲಿಕವಾಗಿ ಅಮೆರಿಕಾದಲ್ಲಿ ನೆಲೆಸಿರುವವರ ಮಕ್ಕಳ ಜನ್ಮಸಿದ್ಧ ಪೌರತ್ವಕ್ಕೆ ನಿರ್ಬಂಧ ಹೇರಿದ ಅಧ್ಯಕ್ಷ ಡೊನಾಲ್ಡ್ ಟ್ರಂಪ್
- ದೆಹಲಿ ವಿಧಾನಸಭಾ ಚುನಾವಣೆ; ಸಂಕಲ್ಪ ಪತ್ರದಲ್ಲಿ ಬಿಜೆಪಿಯಿಂದ ಉಚಿತ ಶಿಕ್ಷಣದ ಭರವಸೆ; ಆಪ್ ನಾಯಕ ಅರವಿಂದ ಕೇಜ್ರಿವಾಲ್ ಆಕ್ಷೇಪ
- ಪುದುಚೇರಿಯಲ್ಲಿಂದು ಐದು ದಿನಗಳ ದಕ್ಷಿಣ ಭಾರತ ವಿಜ್ಞಾನ ಮೇಳಕ್ಕೆ ಚಾಲನೆ
- ಹತ್ತೊಂಬತ್ತು ವರ್ಷದೊಳಗಿನವರ ಐಸಿಸಿ ಮಹಿಳಾ ಟಿ-೨೦ ವಿಶ್ವಕಪ್ ಕ್ರಿಕೆಟ್; ಮಲೇಷಿಯಾ ವಿರುದ್ಧ ಭಾರತಕ್ಕೆ ೧೦ ವಿಕೆಟ್‌ಗಳ ಭರ್ಜರಿ ಜಯ

**<><*<><>*><>**

ಅಮೆರಿಕ ಅಧ್ಯಕ್ಷರಾಗಿ ಅಧಿಕಾರ ವಹಿಸಿಕೊಂಡ ಕೆಲವೇ ಗಂಟೆಗಳಲ್ಲಿ, ಅಧ್ಯಕ್ಷ ಡೊನಾಲ್ಡ್ ಟ್ರಂಪ್, ಹಲವಾರು ಪ್ರಮುಖ ನಿರ್ಧಾರಗಳನ್ನು ಕೈಗೊಂಡಿದ್ದಾರೆ. ಮೊದಲಿಗೆ ಡೊನಾಲ್ಡ್ ಟ್ರಂಪ್, ಮಾಜಿ ಅಧ್ಯಕ್ಷ ಜೋ ಬೈಡನ್ ಜಾರಿಗೊಳಿಸಿದ್ದ ೭೮ ನೀತಿಗಳನ್ನು ರದ್ದುಗೊಳಿಸುವ ಕಡತಗಳಿಗೆ ಸಹಿ ಹಾಕಿದ್ದಾರೆ. ಇದರ ಜೊತೆಗೆ ಅಧ್ಯಕ್ಷ ಟ್ರಂಪ್ ತಾತ್ಕಾಲಿಕ ಮತ್ತು ಕಾನೂನು ಬಾಹಿರವಾಗಿ ಅಮೆರಿಕಾದಲ್ಲಿ ನೆಲೆಸಿರುವ ಪ್ರವಾಸಿಗರು, ವಿದ್ಯಾರ್ಥಿಗಳು ಮತ್ತು ಕೆಲಸದ ಕಾರಣಗಳಿಂದ ಅಮೆರಿಕಾದಲ್ಲಿರುವ ಜನರ ಮಕ್ಕಳಿಗೆ ಜನ್ಮಸಿದ್ಧ ಪೌರತ್ವ ನೀಡಲು ನಿರ್ಬಂಧ ಹೇರುವ ಆದೇಶಕ್ಕೆ ಸಹಿ ಹಾಕಿದ್ದಾರೆ. ಈ ಆದೇಶದ ಅನುಷ್ಠಾನಕ್ಕಾಗಿ ಸಂಸ್ಥೆಗಳಿಗೆ ೩೦ ದಿನಗಳ ಕಾಲಾವಕಾಶ ನೀಡಲಾಗಿದೆ. ಅಮೆರಿಕದಲ್ಲಿ ಜನಿಸಿದ ಮಗು ಪೌರತ್ವ ಪಡೆಯಲು, ಕನಿಷ್ಠ ಒಬ್ಬ ಪೋಷಕರು ಅಮೆರಿಕದ ನಾಗರಿಕರಾಗಿರಬೇಕು, ಗ್ರೀನ್ ಕಾರ್ಡ್ ಹೊಂದಿರುವ ಕಾನೂನುಬದ್ಧ ಶಾಶ್ವತ ನಿವಾಸಿಯಾಗಿರಬೇಕು ಅಥವಾ ಅಮೆರಿಕದ ಮಿಲಿಟರಿ ಸದಸ್ಯರಾಗಿರಬೇಕು ಎಂದು ಆದೇಶದಲ್ಲಿ ಉಲ್ಲೇಖಿಸಲಾಗಿದೆ. ಇದೇ ವೇಳೆ, ವಿಶ್ವ ಆರೋಗ್ಯ ಸಂಸ್ಥೆ-Wಊಔ ಯಿಂದ ಹಿಂದೆ ಸರಿಯುವಂತೆ ಅವರು ನಿರ್ದೇಶಿಸಿದ್ದಾರೆ. ಜಾಗತಿಕ ಆರೋಗ್ಯ ಸಂಸ್ಥೆಯು ಕೋವಿಡ್-೧೯ ಸಾಂಕ್ರಾಮಿಕ ರೋಗವನ್ನು ಅಸಮರ್ಪಕವಾಗಿ ನಿರ್ವಹಿಸಿದ್ದು, ತುರ್ತಾಗಿ ಅಗತ್ಯವಿರುವ ಸುಧಾರಣೆಗಳನ್ನು ಅಳವಡಿಸಿಕೊಳ್ಳುವಲ್ಲಿ ವಿಫಲವಾಗಿರುವುದು ಸೇರಿದಂತೆ ಹಿಂದೆ ಸರಿಯುವಿಕೆಗೆ ಟ್ರಂಪ್ ತಮ್ಮ ಆದೇಶದಲ್ಲಿ ಹಲವಾರು ಕಾರಣಗಳನ್ನು ಉಲ್ಲೇಖಿಸಿದ್ದಾರೆ. ಕೋವಿಡ್-೧೯ ವಿಷಯದಲ್ಲಿ Wಊಔ ಚೀನಾ ಪರ ಪಕ್ಷಪಾತಿ ಧೋರಣೆ ಹೊಂದಿದೆ ಎಂದು ಟ್ರಂಪ್ ಆರೋಪಿಸಿದ್ದಾರೆ. ಈ ನಿರ್ಧಾರದ ಕುರಿತು ವಿಶ್ವ ಆರೋಗ್ಯ ಸಂಸ್ಥೆ, ವಿಷಾದ ವ್ಯಕ್ತಪಡಿಸಿತು. ಈ ಬಗ್ಗೆ ಮರು ಪರಿಶೀಲಿಸುವಂತೆ ಅಧ್ಯಕ್ಷ ಟ್ರಂಪ್ ಅವರನ್ನು ಕೋರಿದೆ. ಪ್ಯಾರಿಸ್ ಹವಾಮಾನ ಒಪ್ಪಂದದಿಂದ ಹಿಂದೆ ಸರಿಯುವ ಪ್ರಕ್ರಿಯೆಯನ್ನು ಪ್ರಾರಂಭಿಸುವ ಆದೇಶಕ್ಕೂ ಅವರು ಸಹಿ ಹಾಕಿದರು. ಚೀನಾ, ಮೆಕ್ಸಿಕೊ ಮತ್ತು ಕೆನಡಾದೊಂದಿಗಿನ ಸುಂಕಗಳು ಮತ್ತು ವ್ಯಾಪಾರ ಸಂಬಂಧಗಳನ್ನು ಪರಿಶೀಲಿಸುವಂತೆ ಅಧ್ಯಕ್ಷ ಟ್ರಂಪ್ ಸರ್ಕಾರಿ

ಸಂಸ್ಥೆಗಳಿಗೆ ನಿರ್ದೇಶನ ನೀಡಿದ್ದು, ಅಮೆರಿಕ-ಮೆಕ್ಸಿಕೊ ಗಡಿಯಲ್ಲಿ ರಾಷ್ಟ್ರೀಯ ತುರ್ತು ಪರಿಸ್ಥಿತಿಯನ್ನು ಘೋಷಿಸಿ ಒಳನುಸುಳುವಿಕೆಯನ್ನು ತಡೆಯಲು ಸೇನಾಪಡೆ ನಿಯೋಜನೆಗೆ ಆದೇಶಿಸಿದ್ದಾರೆ.

<><*<><>*><>

ದೆಹಲಿಯ ಯುವಕರಿಗೆ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ೧೫ ಸಾವಿರ ರೂಪಾಯಿಗಳ ಆರ್ಥಿಕ ನೆರವು ನೀಡುವುದಾಗಿ ಬಿಜೆಪಿ ಭರವಸೆ ನೀಡಿದೆ.  ದೆಹಲಿ ವಿಧಾನಸಭಾ ಚುನಾವಣೆಗಾಗಿ ಬಿಜೆಪಿಯ ಪ್ರಣಾಳಿಕೆ ’ಸಂಕಲ್ಪ ಪತ್ರದ’ ಎರಡನೇ ಭಾಗವನ್ನು ಬಿಡುಗಡೆ ಮಾಡಿದ ಬಿಜೆಪಿ ಹಿರಿಯ ನಾಯಕ ಮತ್ತು ಕೇಂದ್ರ ಸಚಿವ ಅನುರಾಗ್ ಸಿಂಗ್ ಠಾಕೂರ್, ಸರ್ಕಾರಿ ಶಿಕ್ಷಣ ಸಂಸ್ಥೆಗಳಲ್ಲಿ, ಅಗತ್ಯವಿರುವ ವಿದ್ಯಾರ್ಥಿಗಳಿಗೆ ಎಲ್‌ಕೆಜಿ ಯಿಂದ ಸ್ನಾತಕೋತ್ತರ ಪದವಿಯವರೆಗೆ, ಉಚಿತ ಶಿಕ್ಷಣ ಒದಗಿಸಲಾಗುವುದು. ರಾಷ್ಟ್ರ ರಾಜಧಾನಿಯಲ್ಲಿ ಬಿಜೆಪಿ ಅಧಿಕಾರಕ್ಕೆ ಬಂದರೆ, ತಾಂತ್ರಿಕ ಮತ್ತು ವೃತ್ತಿಪರ ಕೋರ್ಸ್‌ಗಳನ್ನು ಮುಂದುವರಿಸಲು ಡಾ.ಬಿ.ಆರ್.ಅಂಬೇಡ್ಕರ್ ವಿದ್ಯಾರ್ಥಿ ವೇತನ ಯೋಜನೆಯಡಿ ಪರಿಶಿಷ್ಟ ಜಾತಿಯ ವಿದ್ಯಾರ್ಥಿಗಳಿಗೆ ತಿಂಗಳಿಗೆ ಒಂದು ಸಾವಿರ ರೂಪಾಯಿಗಳ ವಿದ್ಯಾರ್ಥಿ ವೇತನ  ನೀಡಲಾಗುವುದು ಎಂದು ಹೇಳಿದರು.  ೧೦ ಲಕ್ಷ ರೂಪಾಯಿಗಳ ಜೀವ ವಿಮೆ, ಆಟೋ-ಟ್ಯಾಕ್ಸಿ ಚಾಲಕರಿಗೆ ೫ ಲಕ್ಷ ರೂಪಾಯಿಗಳ ಅಪಘಾತ ವಿಮೆ ಮತ್ತು ವಾಹನ ವಿಮೆ ಹಾಗೂ ಅವರ ಮಕ್ಕಳಿಗೆ ವಿದ್ಯಾರ್ಥಿವೇತನವನ್ನು ಬಿಜೆಪಿ ನೀಡುವುದಾಗಿ ಅವರು ಭರವಸೆ ನೀಡಿದರು.

ಧ್ವನಿ: ಅನುರಾಗ್ ಸಿಂಗ್ ಠಾಕೂರ್

ಮತ್ತೊಂದೆಡೆ ಬಿಜೆಪಿ ಪ್ರಣಾಳಿಕೆ ಕುರಿತು ಆಕ್ಷೇಪ ವ್ಯಕ್ತಪಡಿಸಿರುವ ಆಮ್‌ಆದ್ಮಿ ಪಕ್ಷದ ರಾಷ್ಟ್ರೀಯ ಸಂಚಾಲಕ ಅರವಿಂದ ಕೇಜ್ರಿವಾಲ್ ೧೮ ಲಕ್ಷ ಮಕ್ಕಳು ದೆಹಲಿಯ ಸರ್ಕಾರಿ ಶಾಲೆಗಳಲ್ಲಿ ಉಚಿತ ಶಿಕ್ಷಣ ಪಡೆಯುತ್ತಿದ್ದಾರೆ. ದೆಹಲಿಯ ಈ ಉಚಿತ ಶಿಕ್ಷಣವನ್ನು ಬಿಜೆಪಿ ನಿಲ್ಲಿಸಲಿದೆ ಎಂದು ತಿಳಿಸಿದ್ದಾರೆ.

ಧ್ವನಿ: ಅರವಿಂದ ಕೇಜ್ರಿವಾಲ್

<><*<><>*><>

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು, ಇಂದು ಭಾರತದ ಜಿ-೨೦ ಅಧ್ಯಕ್ಷತೆ ಕುರಿತು ’ಹೌ ಇಂಡಿಯಾ ಸ್ಕೇಲ್ಡ್ ಮೌಂಟ್ ಜಿ-೨೦’ ಎಂಬ ಪುಸ್ತಕವನ್ನು ಬರೆದಿರುವ ಜಿ-೨೦ ಭಾರತದ ಪ್ರತಿನಿಧಿ ಅಮಿತಾಭ್ ಕಾಂತ್ ಅವರನ್ನು ಶ್ಲಾಘಿಸಿದ್ದಾರೆ.  ಈ ಕುರಿತು ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಪ್ರಧಾನಿ, ಮಾನವ ಕೇಂದ್ರಿತ ಅಭಿವೃದ್ಧಿಯನ್ನು ಮತ್ತಷ್ಟು ಹೆಚ್ಚಿಸುವ ಪ್ರಯತ್ನಗಳ ಕುರಿತು ಪುಸ್ತಕವು ಸ್ಪಷ್ಟ ದೃಷ್ಟಿಕೋನವನ್ನು ನೀಡುತ್ತದೆ ಎಂದು ತಿಳಿಸಿದ್ದಾರೆ.

<><*<><>*><>

ನವದೆಹಲಿಯಲ್ಲಿಂದು ಕೇಂದ್ರ ಸರ್ಕಾರ ಆಯೋಜಿಸಿರುವ ’ಪ್ರಧಾನಮಂತ್ರಿ ಜನಜಾತಿ ಆದಿವಾಸಿ ನ್ಯಾಯ ಮಹಾ ಅಭಿಯಾನ್’ ಕುರಿತ ಜಿಲ್ಲಾ ನ್ಯಾಯಾಧೀಶರ ರಾಷ್ಟ್ರೀಯ ಸಮ್ಮೇಳನವನ್ನು ಕೇಂದ್ರ ಆದಿವಾಸಿ ಕಲ್ಯಾಣ್ ಸಚಿವ ಜುವಾಲ್ ಓರಾಮ್ ಉದ್ಘಾಟಿಸಿದರು. ಈ ಸಮ್ಮೇಳನ, ’ಪಿಎಂ ಜನ್‌ಮನ್’ ಯೋಜನೆಯಡಿ ವಸತಿ, ರಸ್ತೆ, ಅಂಗನವಾಡಿ, ಶಾಲಾ ವಸತಿ ನಿಲಯ, ವಿವಿದೋದ್ದೇಶ ಕೇಂದ್ರಗಳು ಮತ್ತು ವನಧನ ವಿಕಾಸ ಕೇಂದ್ರ ಸೇರಿದಂತೆ ಒಟ್ಟು  ಆರು ಪ್ರಮುಖ ವಿಷಯಗಳ ಮೇಲೆ ಕೇಂದ್ರೀಕರಿಸಿದೆ.

<><*<><>*><>

ಪುದುಚೇರಿಯ ಶಾಲಾ ಶಿಕ್ಷಣ ನಿರ್ದೇಶನಾ ಹಾಗೂ ಬೆಂಗಳೂರಿನ ವಿಶ್ವೇಶ್ವರಯ್ಯ ಕೈಗಾರಿಕಾ ಮತ್ತು ತಾಂತ್ರಿಕ ವಸ್ತುಸಂಗ್ರಹಾಲಯದ ಸಹಯೋಗದೊಂದಿಗೆ ನಡೆಯುತ್ತಿರುವ ಐದು ದಿನಗಳ ದಕ್ಷಿಣ ಭಾರತ ವಿಜ್ಞಾನ ಮೇಳ - ೨೦೨೫ ಕ್ಕೆ ಪುದುಚೇರಿಯಲ್ಲಿ ಚಾಲನೆ ದೊರೆತಿದೆ. ಪುದುಚೇರಿ ಲೆಫ್ಟಿನೆಂಟ್ ಗವರ್ನರ್ ಕೆ.ಕೈಲಾಸನಾಥನ್ ಮೇಳವನ್ನು ಉದ್ಘಾಟಿಸಿದರು. ಈ ವೇಳೆ ಮಾತನಾಡಿದ ಅವರು, ದಕ್ಷಿಣ ಭಾರತದ ಈ ವಿಜ್ಞಾನ ಮೇಳವು ಜ್ಞಾನ, ನಾವೀನ್ಯತೆ ಮತ್ತು ಸೃಜನಶೀಲತೆಯ ಹಬ್ಬ ಎಂದು ಬಣ್ಣಿಸಿದ್ದಾರೆ. ವಯನಾಡು ಭೂಕುಸಿತ, ರಸ್ತೆ ಅಪಘಾತ, ಕರ್ನಾಟಕದ ಉತ್ತರಕನ್ನಡ ಜಿಲ್ಲೆಯಲ್ಲಿ ಟ್ರಕ್ ಚಾಲಕ ಅರ್ಜುನ್ ನಾಪತ್ತೆ ಘಟನೆ ಸೇರಿದಂತೆ ಸಮಕಾಲೀನ ವಿಷಯಗಳನ್ನು ವಸ್ತುಪ್ರದರ್ಶನಕ್ಕೆ ಆಯ್ಕೆ ಮಾಡಿಕೊಂಡಿರುವ ವಿದ್ಯಾರ್ಥಿಗಳ ಕ್ರಿಯಾಶೀಲತೆ ಬಗ್ಗೆ ಅವರು ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ. ಕರ್ನಾಟಕ, ಆಂಧ್ರಪ್ರದೇಶ, ಕೇರಳ, ತಮಿಳುನಾಡು ಮತ್ತು ತೆಲಂಗಾಣದಿಂದ ಶಿಕ್ಷಕರು ಮತ್ತು ವಿದ್ಯಾರ್ಥಿಗಳು ಮೇಳದಲ್ಲಿ ಪಾಲ್ಗೊಂಡಿದ್ದಾರೆ.

<><*<><>*><>

ದೇಶದ ಬಾಹ್ಯಾಕಾಶ ಆರ್ಥಿಕತೆ ಎಂಟು ಶತಕೋಟಿ ಡಾಲರ್‌ಗಳಿಗೆ ಬೆಳೆದಿದೆ ಮತ್ತು ಮುಂದಿನ ದಶಕದಲ್ಲಿ ೪೪ ಶತಕೋಟಿ ಡಾಲರ್‌ಗಳನ್ನು ತಲುಪುವ ನಿರೀಕ್ಷೆಯಿದೆ ಎಂದು ಕೇಂದ್ರ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವ ಡಾ.ಜಿತೇಂದ್ರ ಸಿಂಗ್ ಹೇಳಿದ್ದಾರೆ. ಖಾಸಗಿ ವಾಹಿನಿಗೆ ನೀಡಿದ ಸಂದರ್ಶನದಲ್ಲಿ ಅವರು, ಗಗನಯಾನ ಯೋಜನೆ, ೨೦೨೭ ರಲ್ಲಿ ಮುಂಬರುವ ಚಂದ್ರಯಾನ-೪ ಯೋಜನೆ, ೨೦೨೮ ರಲ್ಲಿ ಶುಕ್ರಯಾನ ಮಿಷನ್ ಮತ್ತು ೨೦೩೦ ರಲ್ಲಿ ಭಾರತೀಯ ಬಾಹ್ಯಾಕಾಶ ನಿಲ್ದಾಣದಂತಹ ಮೈಲಿಗಲ್ಲುಗಳು ದೇಶದ ಸದೃಢ ಪಥವನ್ನು ಪ್ರದರ್ಶಿಸುತ್ತವೆ ಎಂದು ಹೇಳಿದರು.

<><*<><>*><>

ಕೋಲ್ಕತ್ತಾದ ವಿಶೇಷ ನ್ಯಾಯಾಲಯ, ಸಂಜಯ್ ರಾಯ್‌ಗೆ ಜೀವಾವಧಿ ಶಿಕ್ಷೆ ವಿಧಿಸಿದ್ದ ತೀರ್ಪನ್ನು ಪ್ರಶ್ನಿಸಿ, ಪಶ್ಚಿಮ ಬಂಗಾಳ ಸರ್ಕಾರ ಇಂದು ಕೋಲ್ಕತ್ತಾ ಹೈಕೋರ್ಟ್‌ಗೆ ಮೊರೆ ಹೋಗಿದ್ದು, ಮರಣದಂಡನೆ ವಿಧಿಸುವಂತೆ ಕೋರಿದೆ. ಕಳೆದ ವರ್ಷ ಆಗಸ್ಟ್‌ನಲ್ಲಿ ಕೋಲ್ಕತ್ತಾದ ಆರ್.ಜಿ. ಕರ್ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆಯಲ್ಲಿ ಕಿರಿಯ ವೈದ್ಯೆಯ ಮೇಲೆ ದೈಹಿಕ ದೌರ್ಜನ್ಯ ಮತ್ತು ಹತ್ಯೆ ಮಾಡಿದ್ದಕ್ಕಾಗಿ ಸಂಜಯ್ ರಾಯ್ ದೋಷಿ ಎಂದು ಸಾಬೀತಾಗಿದೆ. ಈ ಸಂಬಂಧ ನ್ಯಾಯಮೂರ್ತಿಗಳಾದ ದೇಬಾಂಗ್ಸು ಬಸಕ್ ಮತ್ತು ಶಬ್ಬರ್ ರಶೀದಿ ಅವರ ವಿಭಾಗೀಯ ಪೀಠ ರಾಜ್ಯ ಸರ್ಕಾರದ ಅರ್ಜಿಯನ್ನು ಸ್ವೀಕರಿಸಿದೆ. ನಿನ್ನೆ, ಇದು ಮರಣದಂಡನೆಗೆ ಅರ್ಹವಾದ ಘೋರ ಅಪರಾಧ ಎಂದಿದ್ದ ಪಶ್ಚಿಮ ಬಂಗಾಳ ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ, ರಾಜ್ಯ ಸರ್ಕಾರ ಅಪರಾಧಿಗೆ "ಮರಣದಂಡನೆ" ವಿಧಿಸಲು ಕಲ್ಕತ್ತಾ ಹೈಕೋರ್ಟ್ ಅನ್ನು ಸಂಪರ್ಕಿಸುವುದಾಗಿ ಘೋಷಿಸಿದ್ದರು. ಬಿಎನ್‌ಎಸ್‌ನ ಸೆಕ್ಷನ್ ೬೪, ೬೬ ಮತ್ತು ೧೦೩ (೧) ಅಡಿಯಲ್ಲಿ ಸಂಜಯ್ ರಾಯ್‌ಗೆ ಜೀವಾವಧಿ ಶಿಕ್ಷೆ ವಿಧಿಸಲಾಗಿದೆ. ಸಂತ್ರಸ್ತೆಯ ಕುಟುಂಬಕ್ಕೆ ೧೭ ಲಕ್ಷ ರೂಪಾಯಿ ಪರಿಹಾರ ನೀಡುವಂತೆ ರಾಜ್ಯ ಸರ್ಕಾರಕ್ಕೆ ನ್ಯಾಯಾಲಯ ನಿರ್ದೇಶನ ನೀಡಿದೆ.

<><*<><>*><>

ನಕ್ಸಲ್ ಮುಕ್ತ ಭಾರತ ನಿರ್ಮಾಣದೆಡೆಗೆ ಭಾರತದ ಭದ್ರತಾಪಡೆಗಳು ಮತ್ತೊಂದು ದಾಪುಗಾಲಿಟ್ಟಿವೆ. ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ತಿಳಿಸಿದ್ದಾರೆ. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿಂದು ಅವರು, ಒಡಿಶಾ-ಛತ್ತೀಸ್‌ಗಢ ಗಡಿಯಲ್ಲಿ ಕೇಂದ್ರ ಮೀಸಲು ಪೊಲೀಸ್ ಪಡೆ, ಒಡಿಶಾದ ವಿಶೇಷ ಕಾರ್ಯಾಚರಣೆ ತಂಡ ಮತ್ತು ಛತ್ತೀಸ್‌ಗಢ ಪೊಲೀಸರು ಜಂಟಿಯಾಗಿ ಕಾರ್ಯಾಚರಣೆ ನಡೆಸಿ, ೧೪ ನಕ್ಸಲರನ್ನು ಹತ್ಯೆ ಮಾಡಿದ್ದಾರೆ. ಸರ್ಕಾರ

ಮತ್ತು ಭದ್ರತಾ ಪಡೆಗಳ ಜಂಟಿ ಪ್ರಯತ್ನ ಭಾರತವನ್ನು ನಕ್ಸಲ್ ಮುಕ್ತ ದೇಶವನ್ನಾಗಿಸಲಿವೆ ಎಂದು ಹೇಳಿದ್ದಾರೆ.

**<><*<><>*><>**

ಪಶ್ಚಿಮ ಬಂಗಾಳದಾದ್ಯಂತ ಇಂದು ಸ್ವಾಮಿ ವಿವೇಕಾನಂದರ ೧೬೩ನೇ 'ಜನ್ಮತಿಥಿ' ಆಚರಿಸಲಾಗುತ್ತಿದೆ. ಉತ್ತರ ಕೋಲ್ಕತ್ತಾದ ಸಿಮ್ಲಾ ಬೀದಿಯಲ್ಲಿರುವ ವಿವೇಕಾನಂದರ ಜನ್ಮಸ್ಥಳದಲ್ಲಿ ವಿಶೇಷ ಕಾರ್ಯಕ್ರಮಗಳನ್ನು ಏರ್ಪಡಿಸಲಾಗಿದೆ.

**<><*<><>*><>**

ಹೆಣ್ಣುಮಕ್ಕಳ ಸುರಕ್ಷತೆ, ಶಿಕ್ಷಣ ಮತ್ತು ಸಬಲೀಕರಣದ ಗುರಿಯೊಂದಿಗೆ ಜಾರಿ ಮಾಡಲಾದ 'ಬೇಟಿ ಬಚಾವ್ ಬೇಟಿ ಪಢಾವ್' ಉಪಕ್ರಮದ ಹತ್ತನೇ ವಾರ್ಷಿಕೋತ್ಸವನ್ನು ನಾಳೆ ಆಚರಿಸಲಾಗುತ್ತಿದೆ. ನವದೆಹಲಿಯಲ್ಲಿ ನಾಳೆ ನಡೆಯುವ ಪ್ರಧಾನ ಕಾರ್ಯಕ್ರಮದಲ್ಲಿ ಭದ್ರತಾ ಪಡೆ, ಅರೆ ಸೇನಾಪಡೆ, ದೆಹಲಿ ಪೊಲೀಸ್ ಪಡೆಯ ಮಹಿಳಾ ಅಧಿಕಾರಿಗಳು, ವಿದ್ಯಾರ್ಥಿನಿಯರು ಮತ್ತು ಅಂಗನವಾಡಿ ಕಾರ್ಯಕರ್ತೆಯರು ಭಾಗವಹಿಸಲಿದ್ದಾರೆ. ನಾಳೆ ಚಾಲನೆ ದೊರೆಯಲಿರುವ ಹತ್ತನೇ ವಾರ್ಷಿಕೋತ್ಸವದ ಸಂಭ್ರಮಾಚರಣೆ ಅಂತಾರಾಷ್ಟ್ರೀಯ ಮಹಿಳಾ ದಿನವಾದ ಮಾರ್ಚ್ ೮ ರವರೆಗೆ ನಡೆಯಲಿದೆ. ವಿವಿಧ ರಾಜ್ಯ ಹಾಗೂ ಜಿಲ್ಲಾ ಮಟ್ಟದಲ್ಲಿ ಈ ಸಂಬಂಧ ಹಲವು ಕಾರ್ಯಕ್ರಮಗಳನ್ನು ಆಯೋಜಿಸಲಾಗುವುದು ಎಂದು ಕೇಂದ್ರ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವಾಲಯ ತಿಳಿಸಿದೆ. ದೇಶದಲ್ಲಿ ಕುಸಿಯುತ್ತಿರುವ ಮಕ್ಕಳ ಲಿಂಗಾನುಪಾತ ಮತ್ತು ಲಿಂಗ ಅಸಮಾನತೆಯ ಸಮಸ್ಯೆಗೆ ಉತ್ತರವಾಗಿ ೨೦೧೫ರ ಜನವರಿ ೨೨ ರಂದು ಹರಿಯಾಣದ ಪಾಣಿಪತ್‌ನಲ್ಲಿ ಪ್ರಧಾನಿ ನರೇಂದ್ರ ಮೋದಿ, ಈ ಯೋಜನೆಗೆ ಚಾಲನೆ ನೀಡಿದ್ದರು.

**<><*<><>*><>**

ಕೌಲಾಲಂಪುರ್‌ನ ಬಯುಮಾಸ್ ಓವಲ್ ಕ್ರೀಡಾಂಗಣದಲ್ಲಿಂದು ನಡೆದ ೧೯ ವರ್ಷದೊಳಗಿನ ಐಸಿಸಿ ಮಹಿಳಾ ಟಿ-೨೦ ವಿಶ್ವಕಪ್ ಕ್ರಿಕೆಟ್ ಪಂದ್ಯಾವಳಿಯ ಎ ಗುಂಪಿನ ಪಂದ್ಯದಲ್ಲಿ ಭಾರತದ ವನಿತೆಯರ ತಂಡ, ಮಲೇಷಿಯಾ ವಿರುದ್ಧ ೧೦ ವಿಕೆಟ್‌ಗಳ ಭರ್ಜರಿ ಜಯ ಸಾಧಿಸಿದೆ. ಮೊದಲು ಬ್ಯಾಟಿಂಗ್ ಮಾಡಿದ ಮಲೇಷ್ಯಾ ತಂಡ ೧೪.೩ ಓವರ್‌ಗಳಲ್ಲಿ ಕೇವಲ ೩೧ ರನ್‌ಗಳಿಗೆ ತನ್ನೆಲ್ಲ ವಿಕೆಟ್‌ಗಳನ್ನು ಕಳೆದುಕೊಂಡಿತು. ಈ ಗುರಿಯನ್ನು ಬೆನ್ನತ್ತಿದ ಭಾರತ, ಕೇವಲ ೨.೫ ಓವರ್‌ಗಳಲ್ಲಿ ಯಾವುದೇ ವಿಕೆಟ್ ನಷ್ಟವಿಲ್ಲದೇ ೩೨ ರನ್‌ಗಳಿಸಿ ಗೆಲುವಿನ ನಗೆ ಬೀರಿತು.

**<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ನಾಳೆ ಬೆಳಗ್ಗೆ ೭.೦೫ ಕ್ಕೆ <>*><>**